**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,**

**ಸಿದ್ಧಾಪುರ**

**ಸಿ.ಸಿ ನಂ. 599/2025**

ಫಿರ್ಯಾದಿಃ ಮ್ಯಾನೇಜರ್, ಜನತಾ ಕೋ-ಆಪೇರೇಟಿವ್ ಕ್ರೇಡಿಟ್ ಸೊಸೈಟಿ ಲಿಮಿಟೆಡ್ ಭಟ್ಕಾಳ, ಸಿದ್ಧಾಪುರ ಶಾಖೆ, ಸಿದ್ಧಾಪುರ (ಉ.ಕ)

-ವಿರುದ್ಧ-

ಆರೋಪಿಃ ರಿಯಾಜ್‌ಅಹಮದ್ ತಂದೆ ಮೈದಿನ್ ಸಾಬ್,
ವಯಸ್ಸುಃ ಪ್ರಯಸ್ಥ, ವಾಸಃ 280, ಬೇಡ್ಕಣಿ, ಬೇಡ್ಕಣಿ ಪೋಸ್ಟ,
ಸಿದ್ಧಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ.

**ಭಾರತೀಯ ನಾಗರೀಕಾ ಸುರಕ್ಷಾ ಸಂಹಿತೆ ಕಲಂ 351 ರಡಿ ಆರೋಪಿಯ ಹೇಳಿಕೆ**

**ಪ್ರಶ್ನೆಃ1** ನ್ಯಾಯಾಲಯದ ಮುಂದೆ ಅಭಿಯೋಜನೆಯ ಪರವಾಗಿ ನಡೆದ ವಿಚಾರಣೆಯಲ್ಲಿ ಸಾಕ್ಷಿದಾರರ ಹೇಳಿಕೆಗಳನ್ನು ಕೇಳಿದ್ದೀಯಾ?

**ಉತ್ತರಃ**

**ಪ್ರಶ್ನೆಃ** 2. **ಫ್ರಾಸಾ-1 ಶ್ರೀ ಶಾಂತಿಭೂಷಣ ಮಹಾಬಲೇಶ್ವರ ನಾಯ್ಕ, ಮ್ಯಾನೇಜರ್,** ನ್ಯಾಯಾಲಯದ ವ್ಯಾಪ್ತಿಯಲ್ಲಿರುವ ಫಿರ್ಯಾದುದಾರರು ಜನತಾ ಕೋ-ಆಪೇರೇಟಿವ್ ಕ್ರೇಡಿಟ್ ಸೊಸೈಟಿ ಲಿಮಿಟೆಡ್ ಸಂಸ್ಥೆಯು ಕರ್ನಾಟಕ ಸೌಹಾರ್ದಾ ಕೋ-ಆಪರೇಟಿವ್ ಕಾಯ್ದೆ ರಡಿಯಲ್ಲಿ ನೊಂದಾಯಿತ ಸಂಸ್ಥೆಯಾಗಿದ್ದು ಹಣಕಾಸು ವ್ಯವಹಾರ, ಅಗತ್ಯವಿರುವವರಿಗೆ ಹಣವನ್ನು ಸಾಲವಾಗಿ ನೀಡುವ ಸೌಹಾರ್ದ ಸಹಕಾರಿ ಸಂಸ್ಥೆಯಾಗಿದ್ದು, ಆರೋಪಿತನಾದ ನೀನು ಫಿರ್ಯಾದುದಾರರ ಸಹಕಾರಿ ಸಂಸ್ಥೆಯಲ್ಲಿ ಸಾಲಕ್ಕಾಗಿ ಮನವಿ ಮಾಡಿದ್ದು, ನಂತರ ದಿನಾಂಕ 07.09.2023 ರಂದು ಕನಸ್ಯೂಮರ್ ಡ್ಯೂರಬೇಲ್ ಲೊನ್ ಅಡಿಯಲ್ಲಿ ರೂ.50,000/- ಗಳನ್ನು ಸಾಲ ಪಡೆದಿರುತ್ತೀಯಾ ಎಂದು ಸಾಕ್ಷ್ಯವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

**ಪ್ರಶ್ನೆ: 3 ಫ್ರಾಸಾ:1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ಆರೋಪಿತನಾದ ನೀನು ಸಾಲದ ಕಂತುಗಳನ್ನು ಸರಿಯಾಗಿ ಪಾವತಿ ಮಾಡದೆ ಇದ್ದು, ಸದರಿ ಸಾಲದ ಈಗಿನ ಬಾಕಿ ಮೊತ್ತವು ರೂ.60,500/- ಆಗಿದ್ದು ಹಾಗೂ ಫಿರ್ಯಾದುದಾರರ ಸಂಸ್ಥೆಯು ಹಲವು ಬಾರಿ ಸಾಲದ ಮರುಪಾವತಿಗಾಗಿ ಬೇಡಿಕೆ ಇಟ್ಟಿದ್ದು, ಸದರಿ ಸಾಲದ ಬಾಬ್ತಿಗಾಗಿ ದಿನಾಂಕ 11.09.2025 ರಂದು ಎಚ್ ಡಿ ಎಫ್ ಸಿ ಬ್ಯಾಂಕ್, ಶಿವಮೊಗ್ಗ ಶಾಖೆಯ ಚೆಕ್ಕಿನ ಸಂಖ್ಯೆ: 000006 ನ ರೂ.60,500/- ನ ಚೆಕನ್ನು ನೀಡಿರುವುದಾಗಿ ಸಾಕ್ಷ್ಯ ನುಡಿದಿರುತ್ತಾರೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರ:-**

**ಪ್ರಶ್ನೆ: 4. ಫ್ರಾಸಾ:1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ತದನಂತರ ಸಹಕಾರಿ ಸಂಸ್ಥೆಯು ಸದರಿ ಚೆಕನ್ನು ನಗದು ಗೊಳಿಸಲು ಕೆನರಾ ಬ್ಯಾಂಕ್, ಸಿದ್ಧಾಪುರ ಶಾಖೆಗೆ ಹಾಕಿದಾಗ ನಿನ್ನ ಖಾತೆಯಲ್ಲಿ ಸಾಕಷ್ಟು ಹಣ ಇರದ ಕಾರಣ ದಿ: 12.09.2025 ರಂದು "Account Blocked" ಎಂಬ ಹಿಂಬರಹದೊಂದಿಗೆ ವಾಪಸ್ ಬಂದಿರುವುದಾಗಿ ಮತ್ತು ಸದರಿ ವಿಷಯವನ್ನು ದಿ: 08.10.2025 ರಂದು ಅವರ ವಕೀಲರ ಮೂಲಕ ನೋಟೀಸ್ಸು ನೀಡಿ ತಿಳಿಸಿರುವುದಾಗಿ, ಸದರಿ ನೋಟೀಸ್ಸು ದಿನಾಂಕ: 14.10.2025 ರಂದು ಷರಾ Addressee absent and unclaimed return to sender" ಎಂದು ವಾಪಸ್ಸು ಬಂದಿದ್ದು ಹಾಗೂ ಸದರಿ ಹಣವನ್ನು ನೀನು ಮರುಪಾವತಿ ಮಾಡದೇ **ನೆಗೋಷ್ಯಬಲ್ ಇನ್ಸ್ಟುಮೆಂಟ ಆಕ್ಟ, 138** ರ ಅಡಿಯಲ್ಲಿ ಅಫರಾದ ಎಸುಗಿರುವಿರೆಂದು ನಿನ್ನ ಮೇಲೆ ಆರೋಪಣೆ ಇದೆ ಮತ್ತು ಸದ್ರಿ ಆರೋಪಣೆಯನ್ನು ಈ ನ್ಯಾಯಾಲಯದ ಅಧಿಕಾರ ವ್ಯಾಪ್ತಿಯಲ್ಲಿ ಮಾಡಿರುತ್ತೀಯಾ ಎಂದು ಆರೋಪಿಸಲಾಗಿದೆ. ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರ:-**

**ಪ್ರಶ್ನೆ: 5. ಫ್ರಾಸಾ:1** ರವರು ತಮ್ಮ ಸಾಕ್ಷ್ಯದಲ್ಲಿ ಮುಂದುವರೆದು, ನಾನು ಈ ಪ್ರಕರಣದಲ್ಲಿ ಪಿರ್ಯಾದಿ ಸೊಸೈಟಿಯ ವ್ಯವಸ್ಥಾಪಕನಾಗಿರುತ್ತೇನೆ ಎಂದು, ಈ ದಿನ ಸತ್ಯಾಪನಾ ಹೇಳಿಕೆಯ ಪ್ರಮಾಣ ಪತ್ರವನ್ನು ಪತ್ರ ರೂಪದಲ್ಲಿ ಹಾಜರುಪಡಿಸಿದ್ದೇನೆ ಎಂದು, ಅದರಲ್ಲಿ ಹೇಳಿರುವ ಸಂಗತಿಗಳೆಲ್ಲವೂ ಸತ್ಯ ಮತ್ತು ಅದನ್ನು ತಾನೇ ನಮ್ಮ ವಕೀಲರಿಗೆ ಹೇಳಿ ಬರೆಸಿ, ಸಹಿ ಮಾಡಿರುತ್ತೇನೆ ಎಂದು, ಆರೋಪಿ ದಿ: 11-09-2025 ರ HDFC ಬ್ಯಾಂಕ್ ನ ಚೆಕ್ ನಿ.ಪಿ-1 ಎಂದು, ಸದರಿ ನಿ.ಪಿ-1 ರಲ್ಲಿರುವ ಆರೋಪಿಯ ಸಹಿಯನ್ನು ನಿ.ಪಿ-1(ಎ) ಎಂದು, ಸದರಿ ನಿ.ಪಿ-1 ಚೆಕ್ ಅಮಾನ್ಯಗೊಂಡ ಬಗ್ಗೆ ಒಂದು ಬ್ಯಾಂಕ್ ಹಿಂಬರಹವನ್ನು ನಿ.ಪಿ-2 ಎಂದು, ಸದರಿ ನಿ.ಪಿ-1 ಅಮಾನ್ಯಗೊಂಡ ಬಗ್ಗೆ ದಿ:

08-10-2025 ರಂದು ಆರೋಪಿಗೆ ನೀಡಿದ ಲೀಗಲ್ ನೋಟೀಸ್ ನ ಕಚೇರಿ ಪ್ರತಿಯನ್ನು ನಿ.ಪಿ-3 ಎಂದು, ಅಂಚೆ ರಶೀಧಿಯನ್ನು ನಿ.ಪಿ-4 ಎಂದು, ನಿ.ಪಿ-3 ನೋಟೀಸ ನೊಂದಾಯಿತ ಅಂಚೆ ಮೂಲಕ ಕಳುಹಿಸಿದ್ದು, ಸದರಿ ನೋಟೀಸ್ ಆರೋಪಿ ನಿರಾಕರಿಸಿದ್ದು unclaimed ಎಂದು ವಾಪಸ್ ಆದ ಅಂಚೆ ಲಕೊಟೆಯನ್ನು ನಿ.ಪಿ-5 ಎಂದು, ಅಂಚೆ ಲಕೋಟೆಯನ್ನು ತೆರೆದ ನ್ಯಾಯಾಲಯದಲ್ಲಿ ತೆರೆದು ನೋಡಲಾಗಿ, ಸದರಿ ಅಂಚೆ ಲಕೋಟೆಯಲ್ಲಿರುವ ನೋಟೀಸ್ ನ್ನು ನಿ.ಪಿ-5(ಎ) ಎಂದು,ದಿಃ 29-03-2025 ರಂದು ಪಿರ್ಯಾದಿ ಸೊಸೈಟಿಯ ನಿರ್ದೇಶಕ ಮಂಡಳಿಯ ಸಭೆಯಲ್ಲಿ ಪಾಸ್ ಮಾಡಿದ ಠರಾವಿನ ದೃಡಿಕೃತ ಪ್ರತಿಯನ್ನು ನಿ.ಪಿ-6 ಎಂದು, ಗುರುತಿಸಿ ಸಾಕ್ಷ್ಯವನ್ನು ನುಡಿದಿರುತ್ತಾರೆ, ಇದಕ್ಕೆ ನೀನು ಏನು ಹೇಳುತ್ತೀಯಾ?

**ಉತ್ತರಃ-**

ಪ್ರಶ್ನೆಃ **6**. ಈ ಪ್ರಕರಣದಲ್ಲಿ ನಿನಗೆ ಇನ್ನು ಏನಾದರೂ ಹೇಳುವುದು ಇದೆಯೇ ?

**ಉತ್ತರಃ**

ಪ್ರಶ್ನೆಃ **7**. ನಿನ್ನ ಪರವಾಗಿ ಏನಾದರೂ ಸಾಕ್ಷಿ ಅಥವಾ ದಾಖಲೆಗಳನ್ನು ಹಾಜರುಪಡಿಸುವಿಯಾ?

**ಉತ್ತರಃ**

ಫಿರ್ಯಾದುದಾರರ ಪರ ಸಾಕ್ಷಿದಾರರ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ದಿನಾಂಕಃ **04.04.2026** ರಂದು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ನಮೂದಿಸಿಕೊಳ್ಳಲಾಯಿತು.

**ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ.,ಸಿದ್ದಾಪುರ.**